# ಕರ್ನಾಟಕ ವಿಧಾನ ಪರಿಷತ್ತು
## ನೂರ ಐವತ್ತಾರನೆಯ ಅಧಿವೇಶನ

# ಬಸವನ ಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–66)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಬಸವನ ಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2024ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಬಸವನ ಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂ.4)ನ್ನು, ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಬಸವನ ಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಬಸವನ ಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂ. 4)ರ, 3ನೇ ಪ್ರಕರಣದ (4)ನೇ ಉಪಪ್ರಕರಣದಲ್ಲಿರುವ, (ಜಿ) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಜಿ-1) ಪ್ರಾಧಿಕಾರದ ಪರಿಮಿತಿಯೊಳಗೆ ಬರುವ ಪ್ರಾದೇಶಿಕ ಮತಕ್ಷೇತ್ರದಲ್ಲಿ ಬಸವನ ಬಾಗೇವಾಡಿಯನ್ನು ಭಾಗಶಃ ಅಥವಾ ಸಂಪೂರ್ಣವಾಗಿ ಪ್ರತಿನಿಧಿಸುವ ಕರ್ನಾಟಕ ರಾಜ್ಯ ವಿಧಾನ ಪರಿಷತ್ತಿನ ಸದ್ಯಸ್ಯರು - ಪದನಿಮಿತ್ತ ಸದಸ್ಯರು ".

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಪ್ರಾಧಿಕಾರದ ಪರಿಮಿತಿಯೊಳಗೆ ಬರುವ ಪ್ರಾದೇಶಿಕ ಮತಕ್ಷೇತ್ರದಲ್ಲಿ ಬಸವನಬಾಗೇವಾಡಿಯನ್ನು ಭಾಗಶಃ ಅಥವಾ ಸಂಪೂರ್ಣವಾಗಿ ಪ್ರತಿನಿಧಿಸುವ ಕರ್ನಾಟಕ ರಾಜ್ಯ ವಿಧಾನ ಪರಿಷತ್ತಿನ ಸದ್ಯಸ್ಯರನ್ನು ಪದನಿಮಿತ್ತ ಸದಸ್ಯರನ್ನಾಗಿ ಸೇರಿಸಲು ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂ. 4)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

## ಆರ್ಥಿಕ ಜ್ಞಾಪನ ಪತ್ರ

ಈ ಹಂತದಲ್ಲಿ ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಕೃಷ್ಣ ಭೈರೇಗೌಡ**
ಕಂದಾಯ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

**ಅನುಬಂಧ**
**ಬಸವನ ಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2024ರ**
**(2025ರ ಕರ್ನಾಟಕ ಅಧಿನಿಯಮ ಸಂ. 4) ಉದ್ಧೃತ ಭಾಗ**

**XXX XXX XXX**

**3. ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೇ, ಈ ಅಧಿನಿಯಮದ ಉದ್ದೇಶಗಳಿಗಾಗಿ, `ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ' ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ಸ್ಥಾಪಿಸತಕ್ಕದ್ದು.

(2) ಪ್ರಾಧಿಕಾರವು ಬಸವನಬಾಗೇವಾಡಿಯಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಹಾಗೂ ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಪ್ರಾಧಿಕಾರವು, ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಕಂದಾಯ ಇಲಾಖೆಯ ಮಂತ್ರಿ, ಪ್ರಾಧಿಕಾರದ ಪದನಿಮಿತ್ತ ಅಧ್ಯಕ್ಷರಾಗಿರತಕ್ಕದ್ದು;

(ಬಿ) ವಿಜಯಪುರ ಜಿಲ್ಲೆಯ ಉಸ್ತುವಾರಿ ಮಂತ್ರಿ - ಪದನಿಮಿತ್ತ ಸದಸ್ಯರು.

(ಸಿ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮಂತ್ರಿ- ಪದನಿಮಿತ್ತ ಸದಸ್ಯರು.

(ಡಿ) ಪ್ರವಾಸೋದ್ಯಮ ಮಂತ್ರಿ- ಪದನಿಮಿತ್ತಸದಸ್ಯರು.

(ಇ) ಬಸವನಬಾಗೇವಾಡಿ ಕ್ಷೇತ್ರವನ್ನು ಪ್ರತಿನಿಧಿಸುವ ರಾಜ್ಯ ವಿಧಾನಸಭೆಯ ಸದಸ್ಯರು- ಪದನಿಮಿತ್ತ ಸದಸ್ಯರು.

(ಎಫ್) ಅಧ್ಯಕ್ಷರು, ಬಸವ ಸಮಿತಿ, ಬಸವ ಭವನ, ಬೆಂಗಳೂರು- ಸದಸ್ಯರು.

(ಜಿ) ಅಧ್ಯಕ್ಷರು, ಅಖಿಲ ಭಾರತ ವೀರಶೈವ ಮಹಾಸಭಾ, ಬೆಂಗಳೂರು- ಸದಸ್ಯರು.

(ಎಚ್) ರಾಜ್ಯ ಸರ್ಕಾರವು ನಾಮನಿರ್ದೇಶಿಸಿದ ಐವರಿಗೆ ಮೀರದ ಸದಸ್ಯರು, ಅವರುಗಳಲ್ಲಿ ಒಬ್ಬರು ದೇವಾಲಯ ವಾಸ್ತುಶಿಲ್ಪದ ಜ್ಞಾನ ಹೊಂದಿರುವ ಸಿವಿಲ್ ಇಂಜಿನಿಯರ್ ಅಥವಾ ವಾಸ್ತುಶಿಲ್ಪಿಯಾಗಿರತಕ್ಕದ್ದು.

(ಐ) ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ- ಪದನಿಮಿತ್ತ ಸದಸ್ಯರು.

(ಜೆ) ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ- ಪದನಿಮಿತ್ತ ಸದಸ್ಯರು.

(ಕೆ) ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ- ಪದನಿಮಿತ್ತ ಸದಸ್ಯರು.

(ಎಲ್) ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ - ಪದನಿಮಿತ್ತ ಸದಸ್ಯರು.

(ಎಂ) ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ - ಪದನಿಮಿತ್ತ ಸದಸ್ಯರು.

(ಎನ್) ಜಿಲ್ಲಾಧಿಕಾರಿ, ವಿಜಯಪುರ ಜಿಲ್ಲೆ- ಪದನಿಮಿತ್ತ ಸದಸ್ಯರು.

(ಓ) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತಿ, ವಿಜಯಪುರ- ಪದನಿಮಿತ್ತ ಸದಸ್ಯರು.

(ಪಿ) ಪ್ರಾಧಿಕಾರದ ಆಯುಕ್ತ -ಸದಸ್ಯ ಕಾರ್ಯದರ್ಶಿಯಾಗಿರತಕ್ಕದ್ದು.

(ಕ್ಯೂ) ಅಧ್ಯಕ್ಷ, ಬಸವನಬಾಗೇವಾಡಿ ಪುರಸಭೆ- ಪದನಿಮಿತ್ತ ಸದಸ್ಯರು.

(ಆರ್) ನಿರ್ದೇಶಕ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಅಥವಾ ಗ್ರೂಪ್-ಎ ದರ್ಜೆಗಿಂತ ಕಡಿಮೆಯಲ್ಲದ ಆತನ ನಾಮ ನಿರ್ದೇಶಿತ- ಪದನಿಮಿತ್ತ ಸದಸ್ಯರು.

(ಎಸ್) ನಿರ್ದೇಶಕ, ಪೌರಾಡಳಿತ ಇಲಾಖೆ ಅಥವಾ ಗ್ರೂಪ್-ಎ ದರ್ಜೆಗಿಂತ ಕಡಿಮೆಯಲ್ಲದ ಆತನ ನಾಮ ನಿರ್ದೇಶಿತ- ಪದನಿಮಿತ್ತ ಸದಸ್ಯರು.

(ಟಿ) ನಿರ್ದೇಶಕ, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಇಲಾಖೆ ಅಥವಾ ಗ್ರೂಪ್-ಎ ದರ್ಜೆಗಿಂತ ಕಡಿಮೆಯಲ್ಲದ ಆತನ ನಾಮ ನಿರ್ದೇಶಿತ- ಪದನಿಮಿತ್ತ ಸದಸ್ಯರು.

(ಯು) ಕುಲಪತಿ, ಕರ್ನಾಟಕ ವಿಶ್ವವಿದ್ಯಾಲಯ ,ಧಾರವಾಡ- ಪದನಿಮಿತ್ತ ಸದಸ್ಯರು.

(ವಿ) ಕುಲಪತಿ, ಕನ್ನಡ ವಿಶ್ವವಿದ್ಯಾಲಯ, ಹಂಪಿ - ಪದನಿಮಿತ್ತ ಸದಸ್ಯರು.

(ಡಬ್ಲ್ಯೂ) ಕುಲಪತಿ, ಕರ್ನಾಟಕ ವಿಶ್ವವಿದ್ಯಾಲಯ ,ಧಾರವಾಡ- ಪದನಿಮಿತ್ತ ಸದಸ್ಯರು.

(ಎಕ್ಸ್) ಕುಲಪತಿ, ಕನ್ನಡ ವಿಶ್ವವಿದ್ಯಾಲಯ, ಹಂಪಿ - ಪದನಿಮಿತ್ತ ಸದಸ್ಯರು.

(5) ಮುಖ್ಯ ಮಂತ್ರಿಯವರು ಸಚಿವ ಸಂಪುಟದ ಯಾವೊಬ್ಬ ಮಂತ್ರಿಯನ್ನು ಪ್ರಾಧಿಕಾರದ ಉಪಾಧ್ಯಕ್ಷರನ್ನಾಗಿ ನಾಮನಿರ್ದೇಶಿಸಬಹುದು.

**XXX XXX XXX**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 250, 21ನೇ ಆಗಸ್ಟ್ 2025